# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 322 (457) |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10.07.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ ಮೂಲ ಸೌಕರ್ಯಗಳಿಲ್ಲದ ಇನ್ನೂ ಎಷ್ಟು ಶಾಲೆಗಳಿವೆ; ಸರ್ಕಾರ ನೀಡಿದ ಗಡುವಿನಲ್ಲಿ ಎಷ್ಟು ಶಾಲೆಗಳು ಆದೇಶ ಪಾಲನೆ ಮಾಡಿದೆ: | ರಾಜ್ಯದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳನ್ನುಸಹಾಯಾನುದಾನಕ್ಕೆ ಒಳಪಡಿಸುವಾಗ ನಿಯಮಾನುಸಾರ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಳ್ಳಲು (ಸ್ವಂತ ಕಟ್ಟಡ, ಆಟದ ಮೈದಾನ, ಎಸ್.ಎಸ್‌ಎಲ್.ಸಿ ಫಲಿತಾಂಶ ಹಾಗೂ ಇತರೆ ಮೂಲಭೂತ ಸೌಲಭ್ಯಗಳು) ಮೂರು ವರ್ಷಗಳ ಕಾಲಾವಕಾಶ ನೀಡಿ ಸಹಾಯಾನುದಾನಕ್ಕೊಳಪಡಿಸಲು ಆದೇಶಿಸಲಾಗಿರುತ್ತದೆ. ಈ ರೀತಿ ಸಹಾಯಾನುದಾನ ಪಡೆದ ಶಿಕ್ಷಣ ಸಂಸ್ಥೆಗಳು 3 ವರ್ಷಗಳ ಒಳಗೆ ಕರ್ನಾಟಕ ಶಿಕ್ಷಣ ಕಾಯ್ದೆ–1983ರಡಿ ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಶಾಲೆಗಳಿಗೆ ಒದಗಿಸಬೇಕಾಗಿರುತ್ತದೆ.<br>ಈ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಡಿ 24 ಎಸ್‌ಇಎಸ್ 2022, ದಿನಾಂಕ:19.07.2022ರಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳು ಸಹಾಯಾನುದಾನಕ್ಕೆ ಒಳಪಟ್ಟ ನಂತರ ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿ ಕಾಲಕಾಲಕ್ಕೆ ನಿಗಧಿಪಡಿಸಿರುವ ನಿಯಮಗಳನ್ವಯ ಅನುದಾನಿತ ಶಾಲೆ/ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಒದಗಿಸಿರುವ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿ ಮೂರು ತಿಂಗಳೊಳಗಾಗಿ ಸಂಬಂಧಪಟ್ಟ ಆಯುಕ್ತರು /ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಇವರಿಗೆ ವರದಿ ಸಲ್ಲಿಸಲು ಪ್ರತಿ ಜಿಲ್ಲೆಯಲ್ಲಿ ಈ ಕೆಳಕಂಡ ಸಮಿತಿ ರಚಿಸಲಾಗಿದೆ. |
| ಆ | ಸರ್ಕಾರ ಮೂಲಭೂತ ಸೌಕರ್ಯಗಳನ್ನು ಇಂತಿಷ್ಟು ದಿನಗಳಲ್ಲಿ ಕಲ್ಪಿಸದಿದ್ದಲ್ಲಿ, ಅಂತಹ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳಲು ಇಲಾಖೆಗೆ ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೇಯೇ; ಹಾಗಿದ್ದಲ್ಲಿ ಅಂತಹ ಶಾಲೆಗಳ ವಿರುದ್ಧ ಸರ್ಕಾರ ಕ್ರಮ ಜರುಗಿಸಿದೆಯೇ; | |
| ಇ | ಕ್ರಮ ಕೈಗೊಳ್ಳದಿದ್ದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ (ಆ ಅಧಿಕಾರಿಗಳ ಹೆಸರಿನೊಂದಿಗೆ ಸಂಪೂರ್ಣ ವಿವರ ನೀಡುವುದು) | |
| ಈ | ಬಡ ಗ್ರಾಮೀಣ ಮಕ್ಕಳ ಹಿತದೃಷ್ಟಿಯಿಂದ ಮೂಲ ಸೌಕರ್ಯ ಅತಿ ಅವಶ್ಯಕವಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು; ಹಾಗೂ ಕೈಗೊಂಡ ಕ್ರಮಗಳೇನು? | |

| ಕ್ರ ಸಂ | ಪದನಾಮ | ಅಧ್ಯಕ್ಷರು/ಸದಸ್ಯರು |
|---|---|---|
| 1 | ಆಯಾ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ | ಅಧ್ಯಕ್ಷರು |
| 2 | ಆಯಾ ತಾಲ್ಲೂಕಿನ | ಸದಸ್ಯರು |

| | | | | |
|---|---|---|---|---|
| | | | ತಾಲ್ಲೂಕು ಪಂಚಾಯ್ತಿಯ ಕಾರ್ಯನಿರ್ವಹಾಕ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | |
| | | 3 | ಆಯಾ ತಾಲ್ಲೂಕಿನ ತಹಶಿಲ್ದಾರರು, ಕಂದಾಯ ಇಲಾಖೆ | ಸದಸ್ಯರು |
| | | 4 | ಆಯಾ ತಾಲ್ಲೂಕಿನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| | | 5 | ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| | | ಆಯುಕ್ತರು/ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಇವರುಗಳಿಂದ ವರದಿಗಳನ್ನು ಕ್ರೋಢೀಕರಿಸಿ ಸ್ಪಷ್ಟ ಅಭಿಪ್ರಾಯದೊಂದಿಗೆ ಕೈಗೊಳ್ಳಬಹುದಾದ ಕ್ರಮದ ಕುರಿತು ಸರ್ಕಾರಕ್ಕೆ ಸಲ್ಲಿಸಿದ ಕೂಡಲೇ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. | | |

ಸಂಖ್ಯೆ:ಇಪಿ 275 ಎಸ್‌ಇಎಸ್ 2023

(ಎಸ್.ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು